ಆ) ಹಾಗಿದ್ದಲ್ಲಿ ಇದನ್ನು ತಪ್ಪಿಸಲು ಹಾಗೂ ಚುನಾಯಿತ ಪ್ರಾತಿನಿಧ್ಯಕ್ಕೆ ಅರ್ಥಪೂರ್ಣ ಅವಕಾಶ ನೀಡಲು ಪ್ರಾಥಮಿಕ ಸಂಘಗಳಿಗೆ ಸೆಪ್ಟೆಂಬರ್‌ನಲ್ಲೂ, ತಾಲ್ಲೂಕು ಮಟ್ಟದ ಸಂಸ್ಥೆಗಳಿಗೆ ಅಕ್ಟೋಬರ್‌ನಲ್ಲೂ ಜಿಲ್ಲಾ ಮಟ್ಟದ ಸಂಸ್ಥೆಗಳಿಗೆ ನವೆಂಬರ್‌ನಲ್ಲೂ, ರಾಜ್ಯ ಮಟ್ಟದ ಸಂಸ್ಥೆಗಳಿಗೆ ಡಿಸೆಂಬರ್ ತಿಂಗಳಿನಲ್ಲೂ ಚುನಾವಣೆ ನಡೆಸುವುದು ಸೂಕ್ತವಲ್ಲವೆ?

೧) ಹಾಗಿದ್ದಲ್ಲಿ ಸರ್ಕಾರವರು ಈ ಬಗ್ಗೆ ಯಾವ ಕ್ರಮ ಕೈಗೊಳ್ಳುವರು?

ಶ್ರೀ ಆರ್. ಎಲ್. ಜಾಲಪ್ಪ (ಸಹಕಾರ ಮಂತ್ರಿಗಳು)—

ಅ) ಬಂದಿದೆ.

ಆ) ಮತ್ತು ೧) ಈ ಬಗ್ಗೆ ಸಹಕಾರ ಸಂಘಗಳ ಸಂಬಂಧಪಟ್ಟ ಕಾನೂನಿಗೆ ತಿದ್ದುಪಡಿ ಮಾಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆ.

ಕರ್ನಾಟಕ ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರಿಗೆ ಕನಿಷ್ಠ ವೇತನವನ್ನು ನೀಡುವ ಬಗ್ಗೆ

೪೨. ಶ್ರೀ ಆರ್. ವೆಂಕಟರಾಮಯ್ಯ (ಮುಳಬಾಗಿಲು)— ಮಾನ್ಯ ಕಂದಾಯ ಯೋಜನಾ ಮತ್ತು ಕಾರ್ಮಿಕ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ರಾಜ್ಯದಲ್ಲಿರುವ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು? ಹಾಗೂ ಇವರಲ್ಲಿ ಕೃಷಿ ಕಾರ್ಮಿಕರು ಎಷ್ಟು?

ಆ) ಅಸಂಘಟಿತ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿಪಡಿಸಲು ಸರ್ಕಾರದವರು ಒಪ್ಪಿದ್ದಾರಲ್ಲವೆ? ಇಲ್ಲದಿದ್ದಲ್ಲಿ ಅಸಂಘಟಿತ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿಪಡಿಸಲು ಸರ್ಕಾರದವರು ಯೋಜಿಸಿರುವರೇ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಯೋಜನಾ ಹಾಗೂ ಕಾರ್ಮಿಕ ಸಚಿವರು) —

ಅ) ನಮ್ಮ ರಾಜ್ಯದಲ್ಲಿ ಸುಮಾರು ೪೯,೮೭,೦೦೦ ಅಸಂಘಟಿತ ಕಾರ್ಮಿಕರಿರುತ್ತಾರೆ. ಇದರಲ್ಲಿ ಸುಮಾರು ೩೬,೩೬,೦೦೦ ಕೃಷಿ ಕಾರ್ಮಿಕರಿರುತ್ತಾರೆ (೧೯೮೧ರ ಜನಗಣತಿಯ ಆಧಾರದಿಂದ)

ಆ) ೩೦ ಉದ್ಯಮಗಳಿಗೆ ಕನಿಷ್ಠ ವೇತನ ಕಾನೂನಿನ ಪ್ರಕಾರ ಕನಿಷ್ಠ ವೇತನ ನಿಗದಿ ಮಾಡಲಾಗಿದೆ. ಉಳಿದ ಉದ್ಯಮಗಳಿಗೂ ನಿಗದಿ ಮಾಡಲಾಗುವುದು.

ರಾಜ್ಯದಲ್ಲಿನ 'ಸಿ' ಮತ್ತು 'ಡಿ' ವರ್ಗಕ್ಕೆ ಸೇರಿದ ಜಮೀನಿನ ಬಗ್ಗೆ

೪೩. ಶ್ರೀ ಆರ್. ವೆಂಕಟರಾಮಯ್ಯ (ಮುಳಬಾಗಿಲು)— ಮಾನ್ಯ ಕಂದಾಯ, ಯೋಜನಾ ಮತ್ತು ಕಾರ್ಮಿಕ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಸಿ ಮತ್ತು ಡಿ ವರ್ಗಕ್ಕೆ ಸೇರಿದ ಎಷ್ಟು ಎಕರೆ ಭೂಮಿಯನ್ನು ಸಾಮಾಜಿಕ ಅರಣ್ಯ ಇಲಾಖೆಗೆ ಪಡೆಯಲಾಗಿದೆ.

ಆ) ಸಿ ಮತ್ತು ಡಿ ವರ್ಗಕ್ಕೆ ಸೇರಿರುವ ಭೂಮಿಯಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ಬಡ ರೈತರು ಸಾಗುವಳಿ ಮಾಡುತ್ತಿದ್ದರು. ಅದರಲ್ಲಿ ಎಷ್ಟು ರೈತರನ್ನು ಒಕ್ಕಲೆಬ್ಬಿಸಲಾಗಿದೆ.?

೧) ಗ್ರಾಮಾಂತರ ಪ್ರದೇಶದಲ್ಲಿ ಕೃಷಿ ಕಾರ್ಮಿಕರು ಮತ್ತು ಸಣ್ಣ ಮತ್ತು ಅತಿ ಸಣ್ಣ ರೈತರು ಸಾಗುವಳಿ ಮಾಡುತ್ತಿದ್ದ ಮತ್ತು ಮಾಡಲಿಚ್ಛಿಸಿದ ಭೂಮಿ ಸಿ ಮತ್ತು ಡಿ ವರ್ಗದ ಭೂಮಿಯಲ್ಲವೆ.

ಈ) ಹಾಗಿದ್ದಲ್ಲಿ, ಈಗಲಾದರೂ ಸರ್ಕಾರದವರು ಸಿ ಮತ್ತು ಡಿ ವರ್ಗದ ಭೂಮಿಯನ್ನು ಕೃಷಿ ಕಾರ್ಮಿಕರಿಗೆ ಮತ್ತು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ದರಖಾಸ್ತುಗಳಲ್ಲಿ ಕೊಟ್ಟು ಸಹಾಯ ಮಾಡುವರೇ?